# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕಿನ ಮಂಡಲಗೇರಿ ಗ್ರಾಮದಲ್ಲಿ ಸುವರ್ಣ ಗ್ರಾಮ ಯೋಜನೆಯಡಿ ಸಮುದಾಯ ಭವನ ಕಾಮಗಾರಿಯನ್ನು ಅನುಷ್ಠಾನಗೊಳಿಸುವಲ್ಲಿ ನಡೆದಿರುವ ಅವ್ಯವಹಾರ/ಕರ್ತವ್ಯ ಲೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ, ವಿಚಾರಣಾಧಿಕಾರಿಯವರನ್ನು ಬದಲಾಯಿಸುವ ಬಗ್ಗೆ ಆದೇಶ.

ಓದಲಾಗಿದೆ:

1) ಸರ್ಕಾರದ ಕಾರಣ ಕೇಳುವ ನೋಟಿಸ್ ಹಾಗೂ ಆರೋಪ ಪಟ್ಟಿ ಸಂಖ್ಯೆ: ಗ್ರಾಅಪ 26 ಇಎನ್‌ಕ್ಯೂ 2017, ದಿನಾಂಕ: 27.4.2017
2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 26 ಇಎನ್‌ಕ್ಯೂ 2016, ದಿನಾಂಕ:15.11.2017 ಮತ್ತು ತಿದ್ದುಪಡಿ ಆದೇಶ ದಿನಾಂಕ:17.11.2017.
3) ಮಂಡನಾಧಿಕಾರಿಯವರ ಪತ್ರ ಸಂಖ್ಯೆ: ಎಸ್.ಪಿ.ಬಿ/ತಾ.ಸಂ/ಇಎಸ್-2/2017/274, ದಿ:31.5.2018.

ಪ್ರಸ್ತಾವನೆ:-

ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕು ಮಂಡಲಗೇರಿ ಗ್ರಾಮದಲ್ಲಿ ಸುವರ್ಣ ಗ್ರಾಮೋದಯ ಯೋಜನೆಯಡಿ ಕೈಗೊಳ್ಳಲಾದ ಸಮುದಾಯ ಭವನ ನಿರ್ಮಾಣ ಕಾಮಗಾರಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸದೆ ಹಣ ದುರುಪಯೋಗಪಡಿಸಿಕೊಂಡಿರುವ ಆರೋಪಗಳ ಕುರಿತು ಮೇಲೆ ಓದಲಾದ ಕ್ರಮಾಂಕ (1) ರ ದಿನಾಂಕ:27.4.2017 ರ ಆರೋಪ ಪಟ್ಟಿಯಲ್ಲಿ ಮಾಡಲಾದ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ವಿಧಿ ವಿಧಾನದನುಸಾರ ಇಲಾಖಾ ವಿಚಾರಣೆ ನಡೆಸಲು ನಿವೃತ್ತ ಪ್ರಧಾನ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಬಿ.ಎಂ.ಅಂಗಡಿ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ತಾಂತ್ರಿಕ ಸಹಾಯಕರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರನ್ನು ಮಂಡನಾಧಿಕಾರಿಯನ್ನಾಗಿ ಮೇಲೆ ಓದಲಾದ ಕ್ರಮಾಂಕ (2)ರ ದಿನಾಂಕ:15.11.2017 ರ ಆದೇಶದಲ್ಲಿ ನೇಮಿಸಲಾಗಿತ್ತು.

1. ಶ್ರೀ ಹುಲುಗಪ್ಪ ಕಟ್ಟಿಮನಿ, ಹಿಂದಿನ ಕಾ.ಪಾ.ಇಂ, ಪಂ.ರಾ.ಇಂ ವಿಭಾಗ, ಕೊಪ್ಪಳ.
2. ಶ್ರೀ ತಿಮ್ಮಣ್ಣ, ಹಿಂದಿನ ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಯಲಬುರ್ಗಾ.
3. ಶ್ರೀ ಮಹಾಂತಪ್ಪ ಕನ್ನೂರು, ಹಿಂದಿನ ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಯಲಬುರ್ಗಾ.
4. ಶ್ರೀ ಆರ್.ಎನ್.ಕುಲಕರ್ಣಿ, ಹಿಂದಿನ ಕಿ.ಇಂ, ಪಂ.ರಾ.ಇಂ ಉಪವಿಭಾಗ, ಯಲಬುರ್ಗಾ.
5. ಎಸ್.ಡಿ.ನಾಗೋಡ. ಹಿಂದಿನ ಕಿ.ಇಂ, ಪಂ.ರಾ.ಇಂ ಉಪವಿಭಾಗ, ಯಲಬುರ್ಗಾ.

ವಿಚಾರಣಾಧಿಕಾರಿಯಾಗಿ ನೇಮಕಗೊಂಡಿದ್ದ ಶ್ರೀ ಬಿ.ಎಂ.ಅಂಗಡಿ ಇವರು ಅನಾರೋಗ್ಯದ ಕಾರಣಗಳನ್ನು ನೀಡಿ, ವಿಚಾರಣೆ ಪ್ರಾರಂಭಿಸಲು ಒಂದೆರೆಡು ತಿಂಗಳ ಕಾಲಾವಕಾಶ ಅಗತ್ಯ ಇರುತ್ತದೆಯೆಂದು ತಿಳಿಸಿರುತ್ತಾರೆಂದು ಮಂಡನಾಧಿಕಾರಿಯವರು ಸರ್ಕಾರಕ್ಕೆ ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ವರದಿ ಮಾಡಿದ್ದ ಹಿನ್ನೆಲೆಯಲ್ಲಿ ಅದರಂತೆ ವಿಚಾರಣೆ ಪ್ರಾರಂಭವಾಗುವುದನ್ನು ನಿರೀಕ್ಷಿಸಲಾಗಿತ್ತು. ಅದರೆ ಇತ್ತೀಚಿಗೆ ಪಡೆದ ಮಾಹಿತಿಯನುಸಾರ ಇದುವರೆಗೂ ಇಲಾಖಾ ವಿಚಾರಣೆಯನ್ನು ವಿಚಾರಣಾಧಿಕಾರಿಯವರು ಪ್ರಾರಂಭಿಸಿರುವುದಿಲ್ಲ. ಆದ್ದರಿಂದ, ಇಲಾಖಾ ವಿಚಾರಣೆಯನ್ನು ಪೂರ್ಣಗೊಳಿಸಲು ಉಂಟಾಗುವ ವಿಳಂಬವನ್ನು ತಡೆಗಟ್ಟುವ ಉದ್ದೇಶದಿಂದ ವಿಚಾರಣಾಧಿಕಾರಿಗಳನ್ನು ಬದಲಾಯಿಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ, ಈ ಆದೇಶ.

## ಆದೇಶ ಸಂಖ್ಯೆ: ಗ್ರಾಅಪ 26 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ:29.12.2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ, ಸರ್ಕಾರವು ಪ್ರಸ್ತಾವನೆಯಲ್ಲಿ ತಿಳಿಸಿರುವ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳ ಕುರಿತು ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮಾಂಕ (3) ರ ದಿನಾಂಕ:15.11.2017 ರ ಆದೇಶದಲ್ಲಿ ಶ್ರೀ ಬಿ.ಎಂ.ಅಂಗಡಿ ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡಿರುವುದನ್ನು ರದ್ದು ಪಡಿಸಿದೆ.

--2

ಮೇಲೆ ಓದಲಾದ (2) ರ ದಿನಾಂಕ:27.4.2017 ರಲ್ಲಿ ಜಾರಿ ಮಾಡಲಾದ ಆರೋಪ ಪಟ್ಟಿಯಲ್ಲಿ ನಮೂದಿಸಿದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 13 ಹಾಗೂ 11 ರಡಿ ಜಂಟಿ ಇಲಾಖೆ ವಿಚಾರಣೆಯನ್ನು ನಡೆಸಲು ಶ್ರೀ ಸಂಗಪ್ಪ ಹುಚ್ಚಪ್ಪ ಮಿಟ್ಟಲ್ಕೋಡ್, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ. ತಾಂತ್ರಿಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ ಇವರು ಮಂಡನಾಧಿಕಾರಿಯಾಗಿ ಮುಂದುವರಿಯಲಿರುತ್ತಾರೆ.

ವಿಚಾರಣಾಧಿಕಾರಿಗಳು ವಿಚಾರಣೆಯನ್ನು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಿ, ವರದಿ ಸಲ್ಲಿಸಿದ ನಂತರ ನಿಗಧಿತ ಸಂಭಾವನೆ ಮಂಜೂರು ಮಾಡಲಾಗುವುದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/12/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
5. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
7. ಶ್ರೀ ಸಂಗಪ್ಪ ಹುಚ್ಚಪ್ಪ ಮಿಟ್ಟಲ್ಕೋಡ್, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ. ಎಂ.ಐ.ಜಿ-2/78 ಕೆ.ಹೆಚ್.ಬಿ ಕಾಲೋನಿ, ಡಿ.ಎಸ್. ಕೊಪ್ಪ. ಧಾರವಾಡ. ಮೊ.ಸಂ.9448769634
8. ಶ್ರೀ ಬಿ.ಎಂ. ಅಂಗಡಿ, ನಿವೃತ್ತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ನಂ.2107, ಸಾಯಿ ಕಿರಣ, 8ನೇ ಮೇನ್, 2ನೇ ಕ್ರಾಸ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಯಲಹಂಕ, ಬೆಂಗಳೂರು ಮೊ-9449635961.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
10. ತಾಂತ್ರಿಕ ಸಹಾಯಕರು, ಪಂಚಾಯತ್, ರಾಜ್ ಇಂಜಿನಿಯರಿಂಗ್ ವೃತ್ತ, ಬಳ್ಳಾರಿ.
11. ಸಂಬಂಧಿಸಿದ ಅಧಿಕಾರಿಗಳಿಗೆ(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ)
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.